# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ :ತುವಿ: ಕಾ.ಅ.ಪ:ಸಂ:2019-20 650 ದಿನಾಂಕ: 28.05.2019

**ಅಧಿಸೂಚನೆ**

**ವಿಷಯ : 2019-20ನೇ ಶೈಕ್ಷಣಿಕ ಸಾಲಿಗೆ ತುಮಕೂರಿನ ಶ್ರೀದೇವಿ ಪದವಿ ಕಾಲೇಜಿಗೆ ಸಂಯೋಜನೆ ನವೀಕರಿಸುವ ಬಗ್ಗೆ.**

**ಉಲ್ಲೇಖ:** (1) ದಿನಾಂಕ:26.02.2019 ರಂದು ನಡೆದ ವಿದ್ಯಾವಿಷಯಕ ಪರಿಷತ್ ಸಭೆಯ ನಿರ್ಣಯ

(2) ದಿನಾಂಕ:26.02.2019 ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ.

(3) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 27.05.2019

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ - 2000 ರ 59ನೇ ಪ್ರಕರಣದ (17) ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ತುಮಕೂರು ವಿಶ್ವವಿದ್ಯಾನಿಲಯವು 2019-20ನೇ ಶೈಕ್ಷಣಿಕ ಸಾಲಿಗೆ **ಶ್ರೀದೇವಿ ಪದವಿ ಕಾಲೇಜು, ತುಮಕೂರು** ಇಲ್ಲಿ ನಡೆಸುತ್ತಿರುವ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರೆಸಲು ಮಂಜೂರಾತಿ ನೀಡಲಾಗಿದೆ.

| ಕೋರ್ಸು | ವಿಷಯ ಸಮೂಹ / ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಕಾಂ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 40 (ನಲವತ್ತು) |
| ಬಿ.ಸಿ.ಎ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 40 (ನಲವತ್ತು) |
| ಬಿ.ಎಸ್ಸಿ. | ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಗಣಿತಶಾಸ್ತ್ರ | 40 (ನಲವತ್ತು) |
| ಎಂ.ಎ. | ಅರ್ಥಶಾಸ್ತ್ರ | 40 (ನಲವತ್ತು) |
| ಎಂ.ಕಾಂ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 60 (ಅರವತ್ತು) |
| ಎಂ.ಎಸ್ಸಿ. | ಭೌತಶಾಸ್ತ್ರ | 30 (ಮೂವತ್ತು) |
| | ಗಣಿತಶಾಸ್ತ್ರ | 30 (ಮೂವತ್ತು) |
| | ರಸಾಯನಶಾಸ್ತ್ರ | 50 (ಐವತ್ತು) |
| ಭಾಷೆಗಳು : ಕನ್ನಡ, ಇಂಗ್ಲೀಷ್, ಅಡಿಷನಲ್ ಇಂಗ್ಲೀಷ್, ಹಿಂದಿ ಮತ್ತು ಉರ್ದು | | |

SRIDEVI DEGREE COLLEGE & P.G. CENTRE SIRA ROAD, TUMKUR-6. INWARD No. 362 Dt. 31.5.19

**ಷರತ್ತುಗಳು:**

1. **ಕಾಲೇಜಿನ ಪ್ರಾಂಶುಪಾಲರ ಹಾಗೂ ಸ್ನಾತಕೋತ್ತರ ಕೋರ್ಸುಗಳ ಅಧ್ಯಾಪಕರುಗಳ ನೇಮಕಾತಿಯಲ್ಲಿ ವಿಶ್ವವಿದ್ಯಾನಿಲಯದ ಧನ ಸಹಾಯ ಆಯೋಗದ (ಯು.ಜಿ.ಸಿ.) ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.**
2. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತುಗಳನ್ನು ಪಾಲಿಸತಕ್ಕದ್ದು.
3. ವಿಶ್ವವಿದ್ಯಾನಿಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗದಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ಕೋರ್ಸುಗಳಿಗೆ ನಿಗದಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು. ಹೆಚ್ಚುವರಿ ಪ್ರಮಾಣವನ್ನು ಯಾವುದೇ ಕಾರಣಕ್ಕೂ ಮಾಡಬಾರದು.
4. ಯಾವುದೇ ಕೋರ್ಸಿಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೆ ಹೆಚ್ಚುವರಿ ವಿಭಾಗಗಳನ್ನು ತೆರೆಯಬಾರದು.
5. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

31/5/19

(ಪು.ತಿ.ನೋ)

6. ಕಾಲೇಜಿನ ಪ್ರಾಂಶುಪಾಲರು / ಆಡಳಿತ ಮಂಡಳಿಯು ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ವಿಶ್ವವಿದ್ಯಾನಿಲಯವು ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ / ಪರಿನಿಯಮಾವಳಿ ಮತ್ತು ಆದೇಶಗಳನ್ನು ಪಾಲಿಸತಕ್ಕದ್ದು.
7. ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ದರದಲ್ಲಿ ವಿದ್ಯಾರ್ಥಿಗಳಿಂದ ಪಡೆದು ಕೊಳ್ಳತಕ್ಕದ್ದು.
8. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಸಲುವಾಗಿ ಕಾಲೇಜಿನಲ್ಲಿ ಶೈಕ್ಷಣಿಕ ಕ್ರಮವನ್ನು ಉತ್ತಮ ಪಡಿಸತಕ್ಕದ್ದು.
9. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು / ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
10. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

28/5

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

**ಪ್ರಾಂಶುಪಾಲರು, ಶ್ರೀದೇವಿ ಪದವಿ ಕಾಲೇಜು, ಶಿರಾ ರಸ್ತೆ, ತುಮಕೂರು-572 106**

**ಪ್ರತಿಗಳು :**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಥಿ, ಬೆಂಗಳೂರು-1.
2. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3. ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಛೇರಿ ಪ್ರತಿ.